# *4 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ನ್ಯಾಯಾಲಯ, ಮೈಸೂರು*

*ಎಸ್.ಸಿ.* 264/2023

| | | | |
|---|---|---|---|
| **ಸಾಕ್ಷಿದಾರರ ಹೆಸರು** | ಃ ಶ್ರೀ ಚಂದ್ರಶೇಖರ್ | | *ಪ್ರಮಾಣ ಮಾಡಿಸಿದ ದಿನಾಂಕಃ* |
| **ತಂದೆ/ಗಂಡನ ಹೆಸರು** | ಃ ಶ್ರೀ ರಂಗಸ್ವಾಮಿ | | **13.08.2024** |
| **ವಯಸ್ಸು** | ಃ **23** **ವರ್ಷ** | | |
| **ವೃತ್ತಿ** | ಃ ವಾಟರ್ ಮ್ಯಾನ್ | **ಪ್ರಾ.ಸಾ.** | ಃ **03** |
| **ವಾಸಸ್ಥಳ** | ಃ ಬೆಲವತ್ತ ಗ್ರಾಮ | **ಚಾ.ಸಾ.** | ಃ **04** |

**ಮುಖ್ಯ ವಿಚಾರಣೆ ಃ ಸರ್ಕಾರಿ ಅಭಿಯೋಜಕರಿಂದಃ**

. *2023* ರ ಅಕ್ಟೋಬರ್ ತಿಂಗಳಲ್ಲಿ ನಮ್ಮ ಗ್ರಾಮದಲ್ಲಿ ಗಲಾಟೆ ಆದಾಗ ನಾನು ಮೇಟಗಳ್ಳಿ ಪೋಲೀಸ್ ಠಾಣೆಗೆ ಹೋಗಿದ್ದೆ ಆ ಕಾಲಕ್ಕೆ ನನ್ನ ಸಹಿ ಪಡೆದಿದ್ದರು. ಆ ಕಾಲಕ್ಕೆ ಕೋರ್ಟ್ ಮುಂದೆ ಇರುವ ಆರೋಪಿತನನ್ನು ನನಗೆ ತೋರಿಸಿರಲಿಲ್ಲ. ಆ ಕಾಲಕ್ಕೆ ಈಗ ನಾನು ನೋಡುತ್ತಿರುವ ಎಂ.ಒ *12* ಮತ್ತು *13* ಎಂದು ಗುರುತಿಸಿರುವ ಬ್ಯಾಗ್ ಮತ್ತು ಶರ್ಟ್ ಅನ್ನು ತೋರಿಸಿರಲಿಲ್ಲ. ಈಗ ನಾನು ನೋಡುತ್ತಿರುವ ಮಹಜರ್ ಆ ಕಾಲಕ್ಕೆ ನಾನು ಸಹಿ ಮಾಡಿದ್ದ ದಾಖಲೆಯಿದ್ದು ಅದರಲ್ಲಿ ನನ್ನ ಸಹಿ ಇದೆ. ಸದರಿ ಮಹಜರ್ ಅನ್ನು ನಿ.ಪಿ–*10* ಮತ್ತು ಸಹಿಯನ್ನು ನಿ.ಪಿ–*10(ಎ)* ಎಂದು ಗುರುತಿಸಿದೆ.

*ಈ ಹಂತದಲ್ಲಿ, ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಸರ್ಕಾರಿ ಅಭಿಯೋಜಕರು ಅನುಮತಿ ಕೋರಿದ್ದಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.*

*ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ-*

2. ದಿಃ*15.07.2023* ರಂದು ರಾತ್ರಿ *9.45* ರಿಂದ *10.15* ರ ಸಮಯದಲ್ಲಿ ನನ್ನ ಸಮಕ್ಷಮ ಮೇಟಗಳ್ಳಿ ಪೋಲೀಸ್ ಠಾಣೆಯಲ್ಲಿ ಮಹಜರ್ ಮಾಡಿದ್ದರು ಎಂದರೆ ಸರಿಯಲ್ಲ. ಆ ಕಾಲಕ್ಕೆ ಈಗ ಕೋರ್ಟ್ ಮುಂದೆ ಇರುವ ಆರೋಪಿತ ಹಾಜರುಪಡಿಸಿದ್ದ ಈಗ ನಾನು ನೋಡುತ್ತಿರುವ ಎಂ.ಒ *12* ಮತ್ತು *13* ಎಂದು ಗುರುತಿಸಿರುವ ಬ್ಯಾಗ್ ಮತ್ತು ಶರ್ಟ್ ಅನ್ನು ಅಮಾನತ್ತು ಪಡಿಸಿಕೊಂಡಿದ್ದರು ಎಂದರೆ ಸರಿಯಲ್ಲ. ಆ ಕಾಲಕ್ಕೆ ನಿ.ಪಿ*10* ರಂತೆ ಮಹಜರ್ ಬರೆದು ಸಹಿ ಪಡೆದಿದ್ದಾರೆ ಎಂದರೆ ಸರಿಯಲ್ಲ. ಈಗ ಆರೋಪಿತನೊಂದಿಗೆ ಶಾಮೀಲಾಗಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಈ ಬಗ್ಗೆ ನಾನು ಈ ದಿವಸ ------ ನೀಡಿರುತ್ತೇನೆ ಎಂದು ಹೇಳಿಕೆ ಕೊಟ್ಟಿದ್ದೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿ.ಪಿ-*11* ಎಂದು ಗುರುತಿಸಿದೆ.

ಪಾಟೀ ಸವಾಲು ಃ ಆರೋಪಿ ಪರ ವಕೀಲರವರಿಂದಃ- ಇಲ್ಲ

ಮರು ವಿಚಾರಣೆಃ- ಇಲ್ಲ.

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.

*ಓ ಹೇ ಕೇ ಸ ಇ ಎ ಒ.,*

*4 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,*
ಮೈಸೂರು